ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಬೃಹತ್ ಮತ್ತು ಮಧ್ಯಮ ಜಲಾಶಯಗಳ ಸಂಖ್ಯೆ ಎಷ್ಟು

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) -

523 (472) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಮಧ್ಯಮ ಜಲಾಶಯಗಳೆಷ್ಟು; (ಜಿಲ್ಲಾವಾರು ಜಲಾಶಯಗಳ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಜಲಾಶಯಗಳನ್ನು ಯಾವಾಗ ನಿರ್ಮಿಸಲಾಗಿದೆ; ಮತ್ತು ಅವುಗಳು ಎಷ್ಟು ನೀರಿನ ಸಂಗ್ರಹ ಸಾಮರ್ಥ್ಯ ಹೊಂದಿವೆ;

(ಇ) ಜಲಾಶಯಗಳಲ್ಲಿ ಇಲ್ಲಿಯವರೆ ಗೆ ಎಷ್ಟು ಬಾರಿ ಹೂಳನ್ನು ತೆಗೆಯಲಾಗಿದೆ; ಹೂಳು ತುಂಬಿರುವುದರಿಂದ ನೀರಿನ ಸಂಗ್ರಹ ಸಮರ್ಪಕ ಬಳಕೆಗೆ ಧಕ್ಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಜಲಾಶಯಗಳಲ್ಲಿ ಹೂಳು ತೆಗೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಉ) ಹೊಸ ಜಲಾಶಯಗಳನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ? (ವಿವರ ನೀಡುವುದು)